# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 21/05/2022ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ-ಸಭೆ -04/2022-23 ದಿನಾಂಕ: 21.05.2022

ದಿನಾಂಕ: 21/05/2022 ರಂದು ಬೆಳಿಗ್ಗೆ 9.30 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

<u>ಹಾಜರಿದ್ದವರು:</u>

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಎಂ. ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ ಮಹದೇವಪುರ ವಲಯ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀಮತಿ ದೀಪಾ.ವಿ | ಸಹಾಯಕ ಅಭಿಯಂತರರು ಬಿ.ಡಬ್ಲೂ.ಎಸ್.ಎಸ್.ಬಿ (ಐಡಿಯಲ್ ಹೋಮ್ಸ್) |
| 4 | ಶ್ರೀ ರವಿಚಂದ್ರ ಚಾರಿ ಟಿ.ಕೆ | ಹಿರಿಯ ಆರೋಗ್ಯಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |
| 5 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |
| 6 | ಶ್ರೀ ಕೃಷ್ಣಾನಾಯಕ್ | ಕೆಲಸ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |



Scanned by CamScanner

| ಕ್ರ.ಸಂ | ಸಭೆಗೆ ಗೈರು ಹಾಜರಾದ ಅಧಿಕಾರಿಗಳು | ಇಲಾಖೆ |
|---|---|---|
| 1 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೀದಿ ದೀಪ ನಿರ್ವಹಣೆ, ಬಿಬಿಎಂಪಿ, ರಾರಾ ನಗರ ವಲಯ |
| 2 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ರಸ್ತೆ ಮೂಲ ಭೂತ ಸೌಕರ್ಯವಿಭಾಗ, ಬಿಬಿಎಂಪಿ, ರಾರಾನಗರ ವಲಯ |
| 3 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೃಹತ್ ನೀರುಗಾಲುವೆ ವಿಭಾಗ, ಬಿಬಿಎಂಪಿ, ರಾರಾನಗರ ವಲಯ |
| 4 | ಪಶುಪಾಲನಾ ಅಧಿಕಾರಿಗಳು | ಪಶುಪಾಲನಾ ಇಲಾಖೆ, ಬಿಬಿಎಂಪಿ ರಾಜರಾಜೇಶ್ವರಿನಗರ ವಲಯ, |
| 5 | ವಲಯ ಅರಣ್ಯ ಅಧಿಕಾರಿಗಳು | ಅರಣ್ಯ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 6 | ತೋಟಗಾರಿಕಾ ಅಧಿಕ್ಷಕರು | ತೋಟಗಾರಿಕೆ ಇಲಾಖೆ, ಬಿಬಿಎಂಪಿ, ರಾಜರಾಜೇಶ್ವರಿನಗರ ವಲಯ, |
| 7 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೆಂಗಳೂರು ಜಲ ಮಂಡಳಿ |
| 8 | ಸಹಾಯಕ ಅಭಿಯಂತರರು/ ಸಹಾಯಕ ಕಾರ್ಯಪಾಲಕ ಅಭಿಯಂತರರು | ಬೆಸ್ಕಾಂ, ಕೆಂಗೇರಿ ಮತ್ತು ಬೆಸ್ಕಾಂ ತಲಘಟ್ಟಪುರ |
| 9 | ಪೊಲೀಸ್ ಇಲಾಖೆ | ಕೆಂಗೇರಿ, ರಾಜರಾಜೇಶ್ವರಿನಗರ ಮತ್ತು ರಲಘಟ್ಟಪುರ ಪೊಲೀಸ್ ಠಾಣೆ |
| 10 | ಗುತ್ತಿಗೆದಾರರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |
| 11 | ಕಿರಿಯ ಆರೋಗ್ಯ ಪರಿವೀಕ್ಷಕರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |
| 12 | ಹಿರಿಯ ಆರೋಗ್ಯ ಪರಿವೀಕ್ಷಕರು | ಘನತ್ಯಾಜ್ಯ ನಿರ್ವಹಣೆ, ಹೆಮ್ಮಿಗೆಪುರ ವಾರ್ಡ್ ನಂ.198 |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ಅಧಿಕಾರಿಗಳನ್ನು ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.



Scanned by CamScanner

❖ **ಘನತ್ಯಾಜ್ಯ ನಿರ್ವಹಣೆ** :- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯ ಹಳೆ ಕನಕಪುರ ರಸ್ತೆಯಲ್ಲಿ ಮತ್ತು ಬಿ.ಡಬ್ಲ್ಯೂ.ಎಸ್.ಎಸ್.ಬಿ. ಪೈಪ್‌ಲೈನ್ ರಸ್ತೆಯಲ್ಲಿ ಸಾರ್ವಜನಿಕರು ಹಾಗೂ ದಾರಿ ಹೋಕರು ತ್ಯಾಜ್ಯವನ್ನು ರಸ್ತೆಯಲ್ಲಿ ಎಸೆದು ಹೋಗುತ್ತಿರುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲು ಸಭೆಯ ಗಮನಕ್ಕೆ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಅಗತ್ಯ ಕ್ರಮ ಕೈಗೊಳ್ಳಲು ಸೂಚಿಸಿದರು. ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ ಹೆಮ್ಮಿಗೆಪುರ ವಾರ್ಡ್ ಪ್ರದೇಶವು ತುಂಬಾ ದೊಡ್ಡದಾಗಿದ್ದು ಒಬ್ಬ ಮಾರ್ಷಲ್‌ರವರಿಂದ ಪೂರ್ಣ ವಾರ್ಡಿನಾದ್ಯಂತ ಸಂಚರಿಸಿ ಇಂತಹ ಪ್ರಕರಣಗಳಿಗೆ ಕಡಿವಾಣ ಹಾಕುವುದು ಕಷ್ಟ ಸಾಧ್ಯವಾಗಿರುತ್ತದೆ. ಈ ಸಂಬಂಧ ಕನಿಷ್ಠ 03 ಸಂಖ್ಯೆ ಮಾರ್ಷಲ್‌ಗಳನ್ನು ವಾರ್ಡ್‌ಗೆ ಒದಗಿಸಬೇಕೆಂದು ಸಭೆಗೆ ಕೋರಿದರು. ಹೆಮ್ಮಿಗೆಪುರ ವಾರ್ಡ್ ಪ್ರದೇಶವು 30.00 ಚದರ ಕಿ.ಮೀ. ವಿಸ್ತೀರ್ಣವಿದ್ದು 03 ಜನ ಮಾರ್ಷಲ್‌ಗಳ ಅವಶ್ಯಕತೆ ಇರುವ ಬಗ್ಗೆ, ನೇಮಕ ಮಾಡಲು ಸಂಬಂಧಿಸಿದ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಲಾಯಿತು.

❖ **ವಾರ್ಡ್‌ನ ಕಾಮಗಾರಿಗಳು** :- 1) ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಹೆಚ್ಚು ಮಳೆ ಬಂದಂತಹ ಸಂಧರ್ಭದಲ್ಲಿ ಬಿಡಬ್ಲೂಎಸ್‌ಎಸ್‌ಬಿ ರವರಿಂದ ನೂನತನವಾಗಿ ನಿರ್ಮಾಣ ಮಾಡಿರುವ ಒಳಚರಂಡಿ ಮ್ಯಾನ್‌ಹೋಲ್‌ಗಳು ಉಕ್ಕುತ್ತಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಬಿಡಬ್ಲೂಎಸ್‌ಎಸ್‌ಬಿ ಇಲಾಖೆಯ ಅಧಿಕಾರಿಗಳ ಮುಖಾಂತರ ಸಮಸ್ಯೆಯನ್ನು ಬಗೆಹರಿಸಲು ಕೋರಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

2) ವಾರ್ಡ್ ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಈಗಾಗಲೇ ಶೇಕಡ 80% ರಸ್ತೆಗಳು ಡಾಂಬರೀಕರಣವಾಗಿದ್ದು, ಉಳಿದ ರಸ್ತೆಗಳನ್ನು ತುರ್ತಾಗಿ ಡಾಂಬರೀಕರಣಗೊಳಿಸಲು ಬಡಾವಣೆಯ ನಿವಾಸಿಗಳು ಸಭೆಗೆ ಕೋರಿದರು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸರ್ಕಾರದ ಅಮೃತ ನಗರೋತ್ಥಾನ ಯೋಜನೆಯ ಅನುದಾನದಲ್ಲಿ ಬಾಕಿ ಇರುವ ರಸ್ತೆಗಳ ಕಾಮಗಾರಿಗಳನ್ನು ಕೈಗೆತ್ತಿಕೊಂಡು ರಸ್ತೆಗಳ ಡಾಂಬರೀಕರಣ ಮಾಡಲಾಗುವುದೆಂದು ಸಭೆಗೆ ತಿಳಿಸಿದರು.

3) ವಾರ್ಡ್ ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಬೃಹತ್ ಮಳೆನೀರು ಚರಂಡಿ ನಿರ್ಮಾಣ ಕಾಮಗಾರಿಯು ನಡೆಯುತ್ತಿದ್ದು, ಸದರಿ ಕಾಮಗಾರಿಯನ್ನು ನಿಧಾನಗತಿಯಲ್ಲಿ ನಿರ್ವಹಿಸುತ್ತಿದ್ದು, ಇದರಿಂದಾಗಿ ಬಡಾವಣೆಯ ನಿವಾಸಿಗಳಿಗೆ ತೊಂದರೆಯಾಗಿರುವ ಬಗ್ಗೆ ಸಭೆಯ ಗಮನಕ್ಕೆ



Scanned by CamScanner

ತರಲಾಯಿತು. ಈ ಸಂಬಂಧ ಸದರಿ ಸಮಸ್ಯೆಯ ಬಗ್ಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಬೃಹತ್ ನೀರುಗಾಲುವೆ ಇಲಾಖೆಯ ಯಾವುದೇ ಅಧಿಕಾರಿಯು ಸಭೆಗೆ ಹಾಜರಾಗದಿರುವುದು ಕಂಡುಬಂದಿದ್ದು, ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಮೇಲ್ಕಂಡ ಸಮಸ್ಯೆಯನ್ನು ಬೃಹತ್ ನೀರುಗಾಲುವೆ ಅಧಿಕಾರಿಗಳ ಮುಖಾಂತರ ಪರಿಹರಿಸಲಾಗುವುದೆಂದು ಸಭೆಗೆ ತಿಳಿಸಿದರು.

(ದಯಾನಂದ.ಎಸ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್–198, ಹೆಮ್ಮಿಗೆಪುರ

<u>ಪ್ರತಿಯನ್ನು</u>:–

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.



Dispatch to all department and report to me.

Scanned by CamScanner

13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.

16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಯಲ್ಲಿ ತಮ್ಮ ಕಛೇರಿಯ ಸಿಬ್ಬಂದಿಯನ್ನು ನಿಯೋಜಿಸಲು ಕೋರಿ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.



Scanned by CamScanner